ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 1-6-2017

# ಪತ್ರಿಕಾ ಆಮಂತ್ರಣ

1. ಡಿಜಿಟಲ್ ಪ್ರದರ್ಶನ
   ಒಂದಾದ ಭಾರತ
   ಸರ್ದಾರ ಪಟೇಲ್

ಉದ್ಘಾಟನೆ:

ಶ್ರೀ ವಜುಭಾಯಿ ವಾಲಾ,
ರಾಜ್ಯಪಾಲರು, ಕರ್ನಾಟಕ

ದಿನಾಂಕ: 2–6–2017 ಗುರುವಾರ, ಸಮಯ: ಬೆಳಿಗ್ಗೆ 10–30 ಗಂಟೆಗೆ
ಸ್ಥಳ: ವಿಶ್ವೇಶ್ವರಯ್ಯ ಕೈಗಾರಿಕಾ ಮತ್ತು ತಾಂತ್ರಿಕ ವಸ್ತುಸಂಗ್ರಹಾಲಯ,
ಕಸ್ತೂರಬಾ ರಸ್ತೆ, ಬೆಂಗಳೂರು

# ಪತ್ರಿಕಾ ಪ್ರಕಟಣೆ

## ಮಕ್ಕಳ ಜೊತೆ ಮುಖ್ಯಮಂತ್ರಿ ಸಂವಾದ

ಬೆಂಗಳೂರು, ಜೂನ್ 1, (ಕರ್ನಾಟಕ ವಾರ್ತೆ)

ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಹಾಗೂ ಯುನಿಸೆಫ್ ಜಂಟಿಯಾಗಿ ವಿಕಾಸ ಸೌಧದಲ್ಲಿ ಹಮ್ಮಿಕೊಂಡಿದ್ದ ಮುಖ್ಯಮಂತ್ರಿಗಳೊಂದಿಗೆ ಮಕ್ಕಳ ಸಂವಾದ ಕಾರ್ಯಕ್ರಮದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ 200 ಕ್ಕೂ ಹೆಚ್ಚು ಮಕ್ಕಳು ಭಾಗವಹಿಸಿದ್ದರು.

ಮಕ್ಕಳ ಹಕ್ಕುಗಳ ರಕ್ಷಣೆ ಕುರಿತು ಮಕ್ಕಳೊಂದಿಗೆ ಸಂವಾದ ನಡೆಸಿದ ಮುಖ್ಯಮಂತ್ರಿಗಳು ಮಕ್ಕಳ ಪ್ರಶ್ನೆಗಳಿಗೆ ಉತ್ತರ ನೀಡಿದರು. ಗದಗ ಜಿಲ್ಲೆಯ 8 ನೇ ತರಗತಿ ವಿದ್ಯಾರ್ಥಿ ಅರ್ಜುನ್

ತಾಂಡ ಮಕ್ಕಳು ವಲಸೆ ಹೋಗುತ್ತಿದ್ದಾರೆ ತಡೆಗಟ್ಟಲು ಯಾವ ಕ್ರಮ ಕೈಗೊಂಡಿದ್ದೀರಿ ಎಂಬ ಪ್ರಶ್ನೆಗೆ ಉತ್ತರ ಕರ್ನಾಟಕ ಭಾಗದ ಪೋಷಕರು ಗುಳೆ ಹೋಗುತ್ತಾರೆ. ಜೊತೆಯಲ್ಲಿ ಮಕ್ಕಳನ್ನೂ ಸಹ ಕರೆದೊಯ್ಯುತ್ತಾರೆ. ಇತ್ತೀಚಿನ ವರ್ಷಗಳಲ್ಲಿ ಗುಳೆ ಹೋಗುವುದು ಕಡಿಮೆಯಾಗಿದ್ದು ಇದು ಅನ್ನಭಾಗ್ಯ ಯೋಜನೆಯ ಫಲ ಎಂದು ಮುಖ್ಯಮಂತ್ರಿಯವರು ಉತ್ತರಿಸಿದರು.

ಯಾದಗಿರಿ ವಿದ್ಯಾರ್ಥಿನಿ ಜ್ಯೋತಿ ವಿದ್ಯಾರ್ಥಿವೇತನ ಎಲ್ಲಾ ಮಕ್ಕಳಿಗೂ ನೀಡುವಂತೆ ಮನವಿ ಮಾಡಿದ್ದಕ್ಕೆ ಮುಖ್ಯಮಂತ್ರಿಗಳು ಉತ್ತರ ನೀಡಿ ಪ್ರಸ್ತುತ ಪರಿಶಿಷ್ಟ ಜಾತಿ/ಪಂಗಡ ಹಾಗೂ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲಾಗುತ್ತಿದ್ದು ಮೆರಿಟ್ ಆಧಾರದ ಮೇಲೆ ಉಳಿದವರಿಗೂ ಸಹ ನೀಡಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಕ್ಕಳೊಂದಿಗೆ ಯುನಿಸೆಫ್ ಅಧಿಕಾರಿಗಳು ಹಾಗೂ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರು ಮತ್ತು ಸದಸ್ಯರು ಉಪಸ್ಥಿತರಿದ್ದರು.

ಕೆಪಿಪಿ/ಜೆಡಿ/ಕೆಎಂ

## ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಸಾಧನೆ

ಬೆಂಗಳೂರು, ಜೂನ್ 1, (ಕರ್ನಾಟಕ ವಾರ್ತೆ)

ಸಮಾಜ ಕಲ್ಯಾಣ ಇಲಾಖೆಯ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ 461 ಮೊರಾರ್ಜಿ ದೇಸಾಯಿ/ಕಿತ್ತೂರು ರಾಣಿ ಚೆನ್ನಮ್ಮ/ಅಟಲ್ ಬಿಹಾರಿ ವಾಜಪೇಯಿ/ಏಕಲವ್ಯ ಮಾದರಿ ವಸತಿ ಶಾಲೆಗಳು ಮಾರ್ಚ್/ಏಪ್ರಿಲ್-2017 ಸಾಲಿನಲ್ಲಿ ನಡೆದ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಯಲ್ಲಿ 461 ಶಾಲೆಗಳ ಪೈಕಿ 156 ಶಾಲೆಗಳು ಶೇ. 100 ರಷ್ಟು ಸಾಧನೆ ಮಾಡಿವೆ.

193 ಶಾಲೆಗಳು ಶೇ. 90 ಕ್ಕಿಂತ ಹೆಚ್ಚು ಸಾಧನೆ ಮಾಡಿವೆ. 22 ಶಾಲೆಗಳು ಶೇ 70 ಸಾಧನೆ ಮಾಡಿವೆ. 8 ಶಾಲೆಗಳು ಶೇ. 60 ಸಾಧನೆ ಮಾಡಿವೆ. 3 ಶಾಲೆಗಳು ಶೇ. 55 ಕ್ಕಿಂತ ಹೆಚ್ಚು ಅತ್ಯುತ್ತಮ ಸಾಧನೆ ಮಾಡಿವೆ ಎಂದು ಇದರ ಕಾರ್ಯನಿರ್ವಾಹಕ ನಿರ್ದೇಶಕರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಧಾನ ಮಂತ್ರಿ ಮುದ್ರ ಯೋಜನೆಗೆ ಅರ್ಜಿ ಆಹ್ವಾನ

ಬೆಂಗಳೂರು, ಜೂನ್ 1, (ಕರ್ನಾಟಕ ವಾರ್ತೆ)

ಪ್ರಧಾನ ಮಂತ್ರಿ ಮುದ್ರ ಯೋಜನೆಯಡಿ ರಾಜ್ಯದ ನೇಕಾರರು ಸಾಲ ಹಾಗೂ ಬಡ್ಡಿ ಸಹಾಯಧನವನ್ನು ಸ್ಥಳೀಯ ಬ್ಯಾಂಕ್‌ಗಳಿಂದ ಪಡೆದು ಕೈಮಗ್ಗ ವೃತ್ತಿಯನ್ನು ಉಳಿಸಿ ಬೆಳೆಸಲು ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು ಕೈಮಗ್ಗ ಮತ್ತು ಜವಳಿ ಇಲಾಖೆ ಬೆಂಗಳೂರು ಇವರು ತಿಳಿಸಿದ್ದಾರೆ.

ಈ ಯೋಜನೆಯಡಿ ರೂ. 5.00 ಲಕ್ಷಗಳ ವರೆಗೆ ಸಾಲ ಒದಗಿಸಲಾಗುವುದು. ಈ ಸಾಲಕ್ಕೆ ಕೇಂದ್ರ ಸರ್ಕಾರದ ಜವಳಿ ಮಂತ್ರಾಲಯದಿಂದ ಮಾರ್ಜಿನ್ ಮನಿಯಾಗಿ ಸಾಲದ ಮೇಲೆ ಶೇ. 20 ರಷ್ಟು ಅಥವಾ ಗರಿಷ್ಠ ರೂ. 10.000/- ಗಳನ್ನು ನೀಡಲಾಗುವುದು. ಈ ಯೋಜನೆಯಡಿ ಸಾಲದ ಮೇಲೆ ಶೇ. 6 ರಷ್ಟು ಬಡ್ಡಿ ಸಹಾಯಧನವನ್ನು ಕೇಂದ್ರ ಸರ್ಕಾರದ ಜವಳಿ ಮಂತ್ರಾಲಯದಿಂದ ಭರಿಸಲಾಗುವುದು.

ರಾಜ್ಯದ ನೇಕಾರರು ಈ ಯೋಜನೆಯಡಿ ಸಾಲ ಹಾಗೂ ಬಡ್ಡಿ ಸಹಾಯಧನವನ್ನು ಸ್ಥಳೀಯ ಬ್ಯಾಂಕ್‌ಗಳಿಂದ ಪಡೆದು ಕೈಮಗ್ಗ ವೃತ್ತಿಯನ್ನು ಉಳಿಸಿ ಬೆಳೆಸಲು ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರು ಕೈಮಗ್ಗ ಮತ್ತು ಜವಳಿ ಇಲಾಖೆ ಬೆಂಗಳೂರು ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಧಾನ ಮಂತ್ರಿ ಮುದ್ರ ಯೋಜನೆಯು ಭಾರತ ಸರ್ಕಾರದ ಪ್ರಮುಖ ಯೋಜನೆಯಾಗಿದ್ದು, ಈ ಯೋಜನೆಯ ಮುಖ್ಯ ಉದ್ದೇಶ ಕೈಮಗ್ಗ ನೇಕಾರರಿಗೆ ಹೂಡಿಕೆ (ಮಗ್ಗಗಳ ಖರೀದಿ) ಹಾಗೂ ದುಡಿಮೆ ಬಂಡವಾಳಕ್ಕಾಗಿ ಸಮರ್ಪಕವಾಗಿ ಸಕಾಲಕ್ಕೆ ಬ್ಯಾಂಕ್‌ಗಳಿಂದ ಸಾಲ ಒದಗಿಸುವುದು.

# ಮಹಿಳಾ ಸಾಧಕಿಯರ ಮಾಹಿತಿ ನೀಡಲು ಮನವಿ

ಬೆಂಗಳೂರು, ಜೂನ್ 1, (ಕರ್ನಾಟಕ ವಾರ್ತೆ)

ನಾಡಿನ ಕಲೆ, ಸಾಹಿತ್ಯ, ಕ್ರೀಡೆ, ಸಾಮಾಜಿಕ ಅಭಿವೃದ್ಧಿ, ವಿಜ್ಞಾನ ಮುಂತಾದ ವಿವಿಧ ಕ್ಷೇತ್ರಗಳಲ್ಲಿ ಅಪ್ರತಿಮ/ವಿಶಿಷ್ಟ ಸಾಧನೆಗೈದ, ನಾಡಿನ ಶ್ರೇಯೋಭಿವೃದ್ಧಿಗಾಗಿ ಶ್ರಮಿಸಿದ, ರಾಜ್ಯ ಹಾಗೂ ರಾಷ್ಟ್ರ ಪ್ರಶಸ್ತಿ

ಪಡೆದಿರುವ ಹಾಗೂ ವಿಶೇಷ ಸಾಧನೆಗೈದ ಮಹಿಳಾ ಸಾಧಕಿಯರ ಜೀವನ– ಸಾಧನೆಗಳನ್ನು ಪರಿಚಯಿಸುವ ಸಾಕ್ಷ್ಯಚಿತ್ರಗಳನ್ನು ನಿರ್ಮಿಸಲು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಉದ್ದೇಶಿಸಿದೆ.

ಈ ಸಂಬಂಧ ವಿಶೇಷ ಸಾಧನೆಗೈದ ನಾಡಿನ ಮಹಿಳೆಯರ ಮಾಹಿತಿಯನ್ನು, ಅವರ ಸಾಧನೆಯ ವಿವರ, ಪಡೆದಿರುವ ಪ್ರಶಸ್ತಿಗಳ ವಿವರ ಹಾಗೂ ಇನ್ನಿತರ ಮಾಹಿತಿಯನ್ನು ಪೂರಕ ದಾಖಲೆಯೊಡನೆ, ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ, (ಇನ್‌ಫೆಂಟ್ರಿ ರಸ್ತೆ) ಬೆಂಗಳೂರು –560 001 ಇಲ್ಲಿಗೆ ದಿನಾಂಕ 30–7–2017 ರೊಳಗೆ ಕಳುಹಿಸಬಹುದಾಗಿದೆ.

## 2009–10 ನೇ ಚಲನಚಿತ್ರ ಪ್ರಶಸ್ತಿ ವಾಪಸ್

ಬೆಂಗಳೂರು, ಜೂನ್ 1 (ಕರ್ನಾಟಕ ವಾರ್ತೆ)

2009–10 ನೇ ಸಾಲಿನ ರಾಜ್ಯ ವಾರ್ಷಿಕ ಚಲನಚಿತ್ರ ಪ್ರಶಸ್ತಿಗಳ ಪೈಕಿ “ರಾಜ್” ಚಲನಚಿತ್ರಕ್ಕೆ ಶ್ರೀ ಹರಿಕೃಷ್ಣ ಅವರಿಗೆ ನೀಡಲಾಗಿದ್ದ “ಅತ್ಯುತ್ತಮ ಸಂಗೀತ ನಿರ್ದೇಶಕ ಪ್ರಶಸ್ತಿ”, ಶ್ರೀ ಶ್ರೀನಿವಾಸ್ ಬಾಬು ಅವರಿಗೆ ನೀಡಲಾಗಿದ್ದ “ಅತ್ಯುತ್ತಮ ಸಂಕಲಕಾರ ಪ್ರಶಸ್ತಿ”, ಶ್ರೀ ಟಿಪ್ಪು ಅವರಿಗೆ ನೀಡಲಾಗಿದ್ದ “ಅತ್ಯುತ್ತಮ ಹಿನ್ನೆಲೆ ಗಾಯಕ ಪ್ರಶಸ್ತಿ” ಮತ್ತು “ಒಲವೇ ಜೀವನ ಲೆಕ್ಕಚಾರ” ಕನ್ನಡ ಚಲಚನಚಿತ್ರಕ್ಕೆ ಶ್ರೀ ನಾಗತಿಹಳ್ಳಿ ಚಂದ್ರಶೇಖರ್ ಅವರಿಗೆ ನೀಡಲಾಗಿದ್ದ “ಅತ್ಯುತ್ತಮ ಕಥೆ ಬರಹಗಾರ” ಪ್ರಶಸ್ತಿಯನ್ನು ಹಿಂಪಡೆಯಲಾಗಿದೆ.

ಶ್ರೀ ಹರಿಕೃಷ್ಣ, ಶ್ರೀ ಶ್ರೀನಿವಾಸ್ ಬಾಬು ಮತ್ತು ಶ್ರೀ ನಾಗತಿಹಳ್ಳಿ ಚಂದ್ರಶೇಖರ್ ಇವರುಗಳಿಗೆ ಪ್ರಶಸ್ತಿ ಜೊತೆಗೆ ನೀಡಲಾಗಿದ್ದ ಪ್ರಶಸ್ತಿ ಫಲಕ, ಪದಕ, ಪ್ರಶಸ್ತಿ ಪತ್ರ ಮತ್ತು ನಗದು ಬಹುಮಾನಗಳನ್ನು ಹಿಂಪಡೆಯಲಾಗಿದೆ.

ಶ್ರೀ ಟಿಪ್ಪು ಅವರಿಗೆ ಪ್ರಶಸ್ತಿ ಜೊತೆಗೆ ನೀಡಲಾಗಿದ್ದ ಪ್ರಶಸ್ತಿ ಫಲಕ, ಪದಕ, ಮತ್ತು ನಗದು ಬಹುಮಾನಗಳನ್ನು ಹಿಂಪಡೆಯಲಾಗಿದೆ. ಪ್ರಶಸ್ತಿ ಪತ್ರ ಕಳೆದು ಹೋಗಿರುವುದಾಗಿ ತಿಳಿಸಿರುವುದರಿಂದ ಸದರಿ ಪ್ರಶಸ್ತಿ ಪತ್ರವನ್ನು ಹಿಂಪಡೆಯಲಾಗಿಲ್ಲ ಎಂದು ಪ್ರಕಟಣೆ ತಿಳಿಸಿದೆ.

ಎಸ್‌ಎಂ/ಜೆಡಿ/ಜೆಪಿಆರ್.

# ನನ್ನ ಅಧಿಕಾರ ಅವಧಿಯಲ್ಲಿ ಪೊಲೀಸ್ ಇಲಾಖೆಯಲ್ಲಿ ಮಹತ್ವದ ಸುಧಾರಣೆ ತರಲಾಗಿದೆ – ಗೃಹ ಸಚಿವ ಡಾ. ಜಿ. ಪರಮೇಶ್ವರ

**ಬೆಂಗಳೂರು, ಜೂನ್ 1 (ಕರ್ನಾಟಕ ವಾರ್ತೆ)**

ಗೃಹ ಸಚಿವ ಡಾ ಜಿ. ಪರಮೇಶ್ವರ್ ಅವರು ತಮ್ಮ ಗೃಹ ಖಾತೆಗೆ ಇಂದು ರಾಜೀನಾಮೆ ನೀಡುವುದಾಗಿ ತಿಳಿಸಿದರು.

ವಿಧಾನಸಸೌಧದಲ್ಲಿ ಇಂದು ನಡೆದ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಸಚಿವರು ಮುಖ್ಯಮಂತ್ರಿ ಸಿದ್ದರಾಯ್ಯ ಅವರಿಗೆ ಇಂದೇ ನನ್ನ ರಾಜೀನಾಮೆ ಪತ್ರ ಸಲ್ಲಿಸುತ್ತೇನೆ ಎಂದರು.

ಪಕ್ಷದ ಸಂಘಟನೆಯ ದೃಷ್ಟಿಯಿಂದ ಪಕ್ಷದ ವರಿಷ್ಠರು ಹಲವು ತೀರ್ಮಾನಗಳನ್ನು ಕೈಗೊಂಡಿದ್ದು, ನನ್ನನ್ನು ಮತ್ತೆ ಮತ್ತೊಂದು ಬಾರಿಗೆ ಪಕ್ಷದ ಅಧ್ಯಕ್ಷರನ್ನಾಗಿ ಮುಂದುವರಿಸಿರುವ ಕಾರಣ ವರಿಷ್ಠರು ತೀರ್ಮಾನಿಸಿದಂತೆ ನಾನು ಗೃಹ ಖಾತೆಗೆ ರಾಜೀನಾಮೆ ಸಲ್ಲಿಸುತ್ತಿದ್ದೇನೆ. ಇನ್ನೂ ಮುಂದೆ ನಾನು ಪಕ್ಷದ ಸಂಘಟನೆಯಲ್ಲಿ ಪೂರ್ಣ ಪ್ರಮಾಣದಲ್ಲಿ ತೊಡಗಿಸಿಕೊಂಡು ಕರ್ತವ್ಯ ನಿರ್ವಹಿಸುವುದಾಗಿ ತಿಳಿಸಿದ ಗೃಹ ಸಚಿವ ಪರಮೇಶ್ವರ್ ಅವರು ನನ್ನನ್ನು ಮತ್ತೊಂದು ಅವಧಿಗೆ ಪಕ್ಷದ ಅಧ್ಯಕ್ಷರನ್ನಾಗಿ ಮುಂದುವರಿಸಿದ ಕೇಂದ್ರದ ವರಿಷ್ಠರಿಗೆ, ಮುಖ್ಯಮಂತ್ರಿಗಳಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ನಾನು ಗೃಹ ಖಾತೆ ವಹಿಸಿಕೊಂಡ ಮೇಲೆ ಸುಮಾರು ಒಂದು ವರ್ಷ ಏಳು ತಿಂಗಳ ಅವಧಿಯಲ್ಲಿ ಗೃಹ ಇಲಾಖೆಯಲ್ಲಿ ಮಹತ್ವದ ಸುಧಾರಣೆಗಳನ್ನು ತರಲಾಗಿದೆ ಎಂದ ಡಾ. ಜಿ. ಪರಮೇಶ್ವರ್ ಅವರು ಪೊಲೀಸ್ ಆಡಳಿತ ವ್ಯವಸ್ಥೆಯಲ್ಲಿ ಆಧುನಿಕ ತಂತ್ರಜ್ಞಾನ ಅಳವಡಿಕೆ, ಪೊಲೀಸ್ ಸಿಬ್ಬಂಧಿಗೆ 2 ಸಾವಿರ ರೂ. ಭತ್ಯೆ ನೀಡುವುದು. 11 ಸಾವಿರ ಪೊಲೀಸ್ ವಸತಿಗೃಹ ನಿರ್ಮಾಣದ ಗುರಿ ಹೊಂದಿದ್ದು ಈಗಾಗಲೇ ಶೇ. 40 ರಷ್ಟು ವಸತಿಗಳನ್ನು ನಿರ್ಮಾಣ ಮಾಡಲಾಗಿದೆ ಎಂದರು.

ಮುಖ್ಯಮಂತ್ರಿ ಅವರು ನನ್ನ ಇಲಾಖೆಗೆ ಸಂಬಂಧಿಸಿದಂತೆ ಅಗತ್ಯಕ್ಕೆ ತಕ್ಕಂತೆ ಅನುದಾನ ನೀಡಿದ್ದಾರೆ ಎಂದ ಗೃಹ ಸಚಿವರು ಒಂದು ಸಾವಿರ ಅತ್ಯಾಧುನಿಕ ವಾಹನ ಖರೀದಿಸಲಾಗಿದೆ. ಹೊಯ್ಸಳ ಗಸ್ತು ವಾಹನಗಳನ್ನು ಆಧುನಿಕರಣಗೊಳಿಸಲಾಗಿದ್ದು ಹೈವೆ ಪೆಟ್ರೋಲಿಂಗ್ ವ್ಯವಸ್ಥೆಯನ್ನು ಆಧುನಿಕರಣಗೊಳಿಸಲಾಗಿದೆ ಎಂದರು.

ಪೊಲೀಸ್ ಇಲಾಖೆಯಲ್ಲಿ ಖಾಲಿ ಇದ್ದ 23 ಸಾವಿರ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದೆ ಎಂದ ಗೃಹ ಸಚಿವರು 12 ಸಾವಿರ ಪೊಲೀಸ್ ಸಿಬ್ಬಂದಿಗೆ ಮುಂಬಡ್ತಿ

ನೀಡಲಾಗಿದೆ.  ಇಲಾಖೆಯಲ್ಲಿ ಉತ್ತಮ ಸಾಧನೆ ಮಾಡಲು ಸಹಕರಿಸಿದ ಇಲಾಖೆಯ ಎಲ್ಲಾ ಅಧಿಕಾರಿಗಳು ಸಿಬ್ಬಂದಿಗಳಿಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ ಅವರು ತಿಳಿಸಿದರು.

ಎಸ್‌ಎಂ/ಜೆಡಿ/ಜಿಪಿಆರ್.

## ನಾಲ್ಕು ವಾರಗಳ ಬೇಕರಿ ತರಬೇತಿ

ಬೆಂಗಳೂರು, ಜೂನ್ 1 (ಕರ್ನಾಟಕ ವಾರ್ತೆ)

ಬೇಕರಿ ತರಬೇತಿ ಘಟಕದ ವತಿಯಿಂದ 4 ವಾರಗಳ ಬೇಕರಿ ತರಬೇತಿ ಕಾರ್ಯಕ್ರಮವನ್ನು ಆಸಕ್ತಿಯುಳ್ಳ ಬೇಕರಿದಾರರಿಗೆ ಮತ್ತು ಗೃಹಿಣಿಯರಿಗಾಗಿ ಆಯೋಜಿಸಲಾಗಿದೆ. ತರಬೇತಿಯು ಜೂನ್ 5 ರಿಂದ ಪ್ರಾರಂಭವಾಗಲಿದೆ.

ಈ ತರಬೇತಿಯಲ್ಲಿ ಬ್ರೆಡ್, ಬನ್ ಪಪ್ಸ್, ಕೇಕ್‌ಗಳು, ವಿಶೇಷ ಬಿಸ್ಕತ್ತುಗಳು, ರೋಲ್ಸ್‌ಗಳು ಮತ್ತಿತರ ಆಕರ್ಷಕ ಬೇಕರಿ ಪದಾರ್ಥಗಳನ್ನು ಕಲಿಸಲಾಗುವುದು.  ಅಭ್ಯರ್ಥಿಗಳು ಸ್ವತ: ಪದಾರ್ಥ ತಯಾರಿಸುವ ಮೂಲಕ ಕಲಿಯುವ ಸೌಲಭ್ಯವಿದೆ.  ಯಾವುದೇ ವಿದ್ಯಾರ್ಹತೆ ಅವಶ್ಯಕತೆಯಿಲ್ಲ. ತಯಾರಿಕೆಗೆ ಬೇಕಾದ ಕಚ್ಚಾ ಪದಾರ್ಥಗಳನ್ನು ಘಟಕದಲ್ಲೇ ಒದಗಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಸಂಯೋಜಕರು, ಬೇಕರಿ ತರಬೇತಿ ಕೇಂದ್ರ, ವಿಸ್ತರಣಾ ನಿರ್ದೇಶನಾಲಯ, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು – 560 024, ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 23513370 ಮೂಲಕ ಕಚೇರಿಯ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.

ಎಸ್‌ಎಂ/ಜೆಡಿ/ಜಿಪಿಆರ್.

## ಜೂನ್ 5 ರಂದು ವಿಶ್ವ ಪರಿಸರ ದಿನಾಚರಣೆ

ಬೆಂಗಳೂರು, ಜೂನ್ 1 (ಕರ್ನಾಟಕ ವಾರ್ತೆ)

ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯವು ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಜೂನ್ 5 ರ ಸೋಮವಾರದಂದು ಬೆಂಗಳೂರು ನಗರದ

ಧನ್ವಂತರಿ ರಸ್ತೆಯಲ್ಲಿರುವ ಸರ್ಕಾರಿ ಆಯುರ್ವೇದ ಮಹಾವಿದ್ಯಾಲಯ ಆವರಣದಲ್ಲಿ ಬೆಳಿಗ್ಗೆ 10.30 ಗಂಟೆಗೆ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.

ಈ ಕಾರ್ಯಕ್ರಮದಲ್ಲಿ ವಿವಿಧ ಜಾತಿಯ ಔಷಧೀಯ ಸಸ್ಯಗಳನ್ನು ಸಾರ್ವಜನಿಕರಿಗೆ ಉಚಿತವಾಗಿ ವಿತರಿಸಲಾಗುತ್ತದೆ ಮತ್ತು ಇದೇ ಸಂದರ್ಭದಲ್ಲಿ ಗಿಡಮೂಲಿಕೆಗಳನ್ನು ಬಳಸಿ ಸಾಂಕ್ರಾಮಿಕ ರೋಗಗಳಾದ ಡೆಂಗ್ಯು, ಚಿಕುನ್‌ಗುನ್ಯಾ, ಸಾಮಾನ್ಯ ಜ್ವರ ಪ್ರತಿಬಂಧಕ ಕ್ರಮಗಳ ಬಗ್ಗೆ ಉಪನ್ಯಾಸ ಏರ್ಪಡಿಸಲಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆಯಬಹುದಾಗಿದೆ ಎಂದು ಸರ್ಕಾರಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಪ್ರಕಟಣೆ ತಿಳಿಸಿದೆ.

ಎಸ್‌ಎಂ/ಜೆಡಿ/ಜಿಪಿಆರ್.

# Application invited

Bangalore, June 1 (Karnataka Information)

**Online Applications for Arivu-2 Education Loan for CET students for the academic year 2017-18 are being accepted from 5-4-2017. Eligible candidates may submit their application in the prescribed format online from KMDC Website. A printout of the application along with copies of certificates/documents should be mandatorily submitted to the District Manager, KMDC, where the student resides. The last date for submission of online application is extended from 1st June 2017 to 14 th June 2017.**